**ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ. ಎಂ. ಎಫ್.ಸಿ., ನ್ಯಾಯಾಲಯ ಚನ್ನಪಟ್ಟಣ ಚನ್ನಪಟ್ಟಣ.**

**ಸಿ.ಸಿ. ಸಂಖ್ಯೆ: 137/2021**

ಚಾಸಾ:1 ಪ್ರಾಸಾ:1

| | | |
|---|---|---|
| ಹೆಸರು | : | ಶಿವಕುಮಾರ್ |
| ಗಂಡನ/ತಂದೆಯ ಹೆಸರು | : | ಮಹಾಲಿಂಗ |
| ವಯಸ್ಸು | : | 28 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸ | : | ಕೃಷ್ಣಾ ಪುರ ಗ್ರಾಮ. |

**ದಿನಾಂಕ 30.12.2025 ರಂದು ಸಾಕ್ಷಿಯನ್ನು ಕರೆಸಲಾಯಿತು. ಪ್ರಮಾಣವಚನ ಬೋಧಿಸಲಾಯಿತು.**

**ಮುಖ್ಯವಿಚಾರಣೆ: ಮಾನ್ಯ ಎಪಿಪಿ ಯವರಿಂದ:**

ಆರೋಪಿತರು ಗೊತ್ತು. ಚಾಸಾ-**2** ನನ್ನ ತಂದೆ ಚಾಸಾ**3** ರಿಂದ ಚಾಸಾ-**6** ರವರು ಗೊತ್ತು. ಆರೋಪಿತರಿಗೂ ಮತ್ತು ನನಗೂ ಬಾಯಿಮಾತಿನ ಜಗಳ ಆಗಿರುತ್ತದೆ. ಆರೋಪಿತರು ನನಗೆ ಅವಾಚ್ಯ ಶಬ್ದದಿಂದ ನಿಂದಿಸಿಲ್ಲ, ನನ್ನ ಮೇಲೆ ಹಲ್ಲೆ ಮಾಡಿಲ್ಲ, ಪ್ರಾಣ ಬೆದರಿಕೆ ಹಾಕಿಲ್ಲ, ಈ ಬಗ್ಗೆ ನಾನು ಪೋಲಿಸರಿಗೆ ದೂರು ನೀಡಿರುತ್ತೇನೆ. ಸದರಿ ದೂರನ್ನು ನಿಪಿ-**1** ಎಂದು ಗುರುತಿಸಲಾಯಿತು, ಅದರಲ್ಲಿರುವ ನನ್ನ ಸಹಿಯನ್ನು ನಿಪಿ-**1(ಎ)** ಎಂದು ಗುರುತಿಸಲಾಯಿತು.

ನಾನು ಪೋಲಿಸರ ಮುಂದೆ ಮುಂದುವರೆದ ಹೇಳಿಕೆಯನ್ನು ನೀಡಿಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಪಿ-**2** ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯನ್ನು ಸಂಪೂರ್ಣ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸ.ಸ.ಅ ರವರು ಅನುಮತಿ ಕೋರಿದ್ದಾರೆ, ಅನುಮತಿಸಲಾಯಿತು).**

**ಪಾಟೀ ಸವಾಲು: ಎಪಿಪಿಯವರಿಂದ:**

ದಿನಾಂಕ 28.11.2020 ರಂದು ಮಧ್ಯಾಹ್ನ 3.30 ಗಂಟೆಯ ಸಮಯದಲ್ಲಿ 1ನೇ ಆರೋಪಿ ಬೋರ್ ವೆಲ್ ವಿಚಾರವಾಗಿ ಚಾಸಾ3 ರವರ ಜೊತೆ ಜಗಳ ತೆಗೆದು ಗಲಾಟೆ ಮಾಡುತ್ತಿದ್ದಾಗ ನಾನು ಜಗಳ ಬಿಡಿಸಲು ಹೋದಾಗ 1ನೇ ಆರೋಪಿ ನನಗೆ ಅವಾಚ್ಯ ಶಬ್ದದಿಂದ ಬೈದಿರುತ್ತಾರೆಂದರೆ ಸರಿಯಲ್ಲ. ಆಗ

1ನೇ ಆರೋಪಿಯು ಕಾಯಿ ಕೀಳುವ ಕುಡುಗೋಲಿನಿಂದ ನನ್ನ ತಲೆಗೆ ಹೊಡೆದು ರಕ್ತ ಗಾಯ ಪಡಿಸಿರುತ್ತಾರೆಂದರೆ ಸರಿಯಲ್ಲ.2 ನೇ ಆರೋಪಿ ನನಗೆ ಅಲ್ಲೇ ಬಿದ್ದಿದ್ದ ದೊಣ್ಣೆಯಿಂದ ಕೈ ಕಾಲುಗಳಿಗೆ ಹೊಡೆದು ನೋವುಂಟು ಮಾಡಿರುತ್ತಾರೆಂದರೆ ಸರಿಯಲ್ಲ. ಆಗ ಅಲ್ಲೇ ಇದ್ದ ಚಾಸಾ2 ರವರಿಗೂ ಸಹ 2ನೇ ಆರೋಪಿ ದೊಣ್ಣೆಯಿಂದ ಅವರ ಕಾಲಿಗೆ ಹೊಡೆದಿರುತ್ತಾರೆಂದರೆ ಸರಿಯಲ್ಲ. 3ನೇ ಆರೋಪಿ ನನಗೆ ಕಲ್ಲಿನಿಂದ ಮತ್ತು ದೊಣ್ಣೆಯಿಂದ ನನ್ನ ತಲೆಗೆ ಹೊಡೆದು ನೋವುಂಟು ಮಾಡಿರುತ್ತಾರೆಂದರೆ ಸರಿಯಲ್ಲ. 4ನೇ ಆರೋಪಿ ನನಗೆ ದೊಣ್ಣೆಯಿಂದ ಭುಜಕ್ಕೆ ಮತ್ತು ಕೈಕಾಲುಗಳಿಗೆ ಹೊಡೆದು ನೋವುಂಟು ಮಾಡಿ ಚಾಸಾ2 ರವರಿಗೂ ಸಹ ಹೊಡೆದು ನೋವುಂಟು ಮಾಡಿರುತ್ತಾರೆಂದರೆ ಸರಿಯಲ್ಲ. 5 ಮತ್ತು 6 ನೇ ಆರೋಪಿತರು ನನಗೆ ಮತ್ತು ಚಾಸಾ2 ರವರಿಗೆ ಕೈಗಳಿಂ ಮತ್ತು ಕಲ್ಲುಗಳಿಂದ ಹೊಡೆದು ನೋವುಂಟು ಮಾಡಿರುತ್ತಾರೆಂದರೆ ಸರಿಯಲ್ಲ. 1 ರಿಂದ 6 ನೇ ಆರೋಪಿತರು ನನಗೆ ಮತ್ತು ಚಾಸಾ2 ರವರಿಗೆ ಪ್ರಾಣ ಬೆದರಿಕೆ ಹಾಕಿರುತ್ತಾರೆಂದರೆ ಸರಿಯಲ್ಲ. ಈ ಬಗ್ಗೆ ನಾನು ದಿಃ29.11.2020 ರಂದು ನಿಪಿ-1 ರಂತೆ ದೂರು ನೀಡಿರುತ್ತೇನೆಂದರೆ ಸರಿಯಲ್ಲ. ದಿಃ02.12.2020 ರಂದು ನಿಪಿ-2 ರಂತೆ ಪೋಲಿಸರಿಗೆ ಮುಂದುವರೆದ ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ.

ಆರೋಪಿತರು ನನ್ನ ಸಂಬಂದಿಕರಾದ ಕಾರಣ ಅವರ ಜೊತೆ ರಾಜಿ ಮಾಡಿಕೊಂಡು ಈ ದಿನ ಉದ್ದೇಶಪೂರ್ವಕವಾಗಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ**

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

**ಮರುವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)**Na**

ಓ.ಹೇ.ಕೇ.ಸ.ಒ

**(ವೆಂಕಟೇಶಪ್ಪ. ವಿ)**
**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.**